**All India Radio: Bangalore**
**National Bulletin In Kannada**
**16.02.2025 19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.02.2025 19.35 p.m.**

**<><><><>**

ಮುಖ್ಯಾಂಶಗಳು

- ನವದೆಹಲಿಯಲ್ಲಿ ಇಂದು 'ಆದಿ ಮಹೋತ್ಸವ್-೨೦೨೫' ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು
- ೨೦೩೦ರ ವೇಳೆಗೆ ದೇಶದ ಜವಳಿ ರಫ್ತು ೯ ಲಕ್ಷ ಕೋಟಿ ರೂಪಾಯಿ ತಲುಪುವ ಗುರಿ ; 'ಭಾರತ್ ಟೆಕ್ಸ್' ಜಾಗತಿಕ ಸಮ್ಮೇಳನದಲ್ಲಿ ಪ್ರಧಾನಿ ನರೇಂದ್ರ ಮೋದಿ
- ಓಮನ್‌ನಲ್ಲಿ ನಡೆಯುತ್ತಿರುವ ೮ನೇ ಹಿಂದೂ ಮಹಾಸಾಗರ ಸಮ್ಮೇಳನದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಭಾಗಿ
- ಡಬ್ಲ್ಯೂಪಿಎಲ್ ಕ್ರಿಕೆಟ್ ; ಗುಜರಾತ್ ಟೈಟಾನ್ಸ್-ಯುಪಿ ವಾರಿಯರ್ಸ್ ಮುಖಾಮುಖಿ

<><><><>

ನವದೆಹಲಿಯಲ್ಲಿ ಇಂದು 'ಆದಿ ಮಹೋತ್ಸವ್-೨೦೨೫' ಸಮಾರಂಭವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ದೇಶದಲ್ಲಿ ಬುಡಕಟ್ಟು ಜನರ ಸಂಪ್ರದಾಯಗಳು ಮತ್ತು ಜೀವನ ವಿಧಾನವು ದೇಶದ ಸಂಸ್ಕೃತಿಯನ್ನು ಶ್ರೀಮಂತಗೊಳಿಸುತ್ತಿವೆ. ಈ ವರ್ಷದ ಬಜೆಟ್‌ನಲ್ಲಿ ಬುಡಕಟ್ಟು ಜನರ ಕಲ್ಯಾಣಕ್ಕಾಗಿ ಹಂಚಿಕೆಯಾಗಿರುವ ಅನುದಾನವು ೩ ಪಟ್ಟು ಹೆಚ್ಚಳವಾಗಿದೆ. ಬುಡಕಟ್ಟು ಸಮಾಜವನ್ನು ಉನ್ನತೀಕರಿಸಿದರೆ ಮಾತ್ರ ದೇಶವು ಅಭಿವೃದ್ಧಿ ಹೊಂದುತ್ತಿದೆ ಎಂದು ಹೇಳಿದರು.

**ಧ್ವನಿ : ರಾಷ್ಟ್ರಪತಿ (೪೧ ಸೆಕೆಂಡ್ಸ್)**

ಭಾರತದ ಬುಡಕಟ್ಟು ಸಮುದಾಯಗಳ ಸಂಸ್ಕೃತಿ, ಪರಂಪರೆ ಮತ್ತು ಆರ್ಥಿಕ ಸಾಮರ್ಥ್ಯವನ್ನು ಪ್ರದರ್ಶಿಸುವುದು ಆದಿ ಮಹೋತ್ಸವದ ಗುರಿಯಾಗಿದೆ. ಈ ಉತ್ಸವದಲ್ಲಿ ೩೦ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಬುಡಕಟ್ಟು ಸಂಪ್ರದಾಯ ಮತ್ತು ಸಂಸ್ಕೃತಿಯು

ಅನಾವರಣಗೊಳ್ಳಲಿದೆ. ೬೦೦ಕ್ಕೂ ಹೆಚ್ಚು ಕುಶಲಕರ್ಮಿಗಳು, ೫೦೦ಕ್ಕೂ ಹೆಚ್ಚು ಕಲಾವಿದರು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದು, ಒಟ್ಟು ೨೫ ಬುಡಕಟ್ಟು ಆಹಾರ ಮೇಳಗಳನ್ನು ಸ್ಥಾಪಿಸಲಾಗಿದೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ನವದೆಹಲಿಯ ರಾಷ್ಟ್ರಪತಿ ಭವನದ ಮುಂಭಾಗದಲ್ಲಿಂದು ನಡೆದ ಹೊಸ ಸ್ವರೂಪದ ಸಿಬ್ಬಂದಿ ಬದಲಾವಣೆ ಸಮಾರಂಭದ ಉದ್ಘಾಟನಾ ಕಾರ್ಯಕ್ರಮವನ್ನು ವೀಕ್ಷಿಸಿದರು. ಸಿಬ್ಬಂದಿ ಬದಲಾವಣೆ ಸಮಾರಂಭವನ್ನು ಇದೇ ೨೨ ರಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಂದರ್ಶಕರು ವೀಕ್ಷಿಸಬಹುದಾಗಿದೆ. ಇದು ಕವಾಯತು ಮತ್ತು ಸಂಗೀತ ಪ್ರದರ್ಶನವನ್ನು ಒಳಗೊಂಡಿರುತ್ತದೆ. ರಾಷ್ಟ್ರಪತಿಗಳ ಅಂಗರಕ್ಷಕ ಪಡೆ ಮತ್ತು ಸೆರುಮೊನಿಯಲ್ ಗಾರ್ಡ್ ಬೆಟಾಲಿಯನ್‌ನ ಪಡೆಗಳು ಮತ್ತು ಕುದುರೆಗಳಿಂದ ಮಿಲಿಟರಿ ಕವಾಯತು ಹಾಗೂ ಸೆರುಮೊನಿಯಲ್ ಮಿಲಿಟರಿ ಗಾರ್ಡ್ ಸಂಗೀತ ಬ್ಯಾಂಡ್ ಸಿಬ್ಬಂದಿಯಿಂದ ಸಂಗೀತ ಪ್ರದರ್ಶನ ಇರುತ್ತದೆ. ಸಂದರ್ಶಕರು ತಮ್ಮ ಸ್ಲಾಟ್‌ಗಳನ್ನು visit.rashtrapatibhavan.gov.in ಪೋರ್ಟಲ್‌ನಲ್ಲಿ ಕಾಯ್ದಿರಿಸಬಹುದು.

<><><>

ದೇಶದ ವಿವಿಧ ಭಾಗಗಳಲ್ಲಿ ತಯಾರಾಗುವ ಜವಳಿಯಲ್ಲಿ ಭಾರತದ ಸಾಂಸ್ಕೃತಿಕ ವೈವಿಧ್ಯತೆ ಪ್ರತಿಫಲಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ನವದೆಹಲಿಯ ಭಾರತ ಮಂಟಪಂನಲ್ಲಿ ಆಯೋಜಿಸಿರುವ 'ಭಾರತ್ ಟೆಕ್ಸ್ ೨೦೨೫' ಜಾಗತಿಕ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ಅವರು, ಕೃಷಿ, ನಾರು, ಬಟ್ಟೆ, ಫ್ಯಾಷನ್ ಮತ್ತು ವಿದೇಶಿ ದೃಷ್ಟಿಕೋನವು ಭಾರತದ ಬೆಳವಣಿಗೆಯನ್ನು ವಿಸ್ತರಿಸುತ್ತದೆ ಎಂದರು. ಇಂದು ಭಾರತ ೬ನೇ ಅತಿದೊಡ್ಡ ಜವಳಿ ಮತ್ತು ಉಡುಪು ರಫ್ತುದಾರ ರಾಷ್ಟ್ರವಾಗಿದೆ. ಜವಳಿ ಕ್ಷೇತ್ರದಲ್ಲಿ ಭಾರತದ ರಫ್ತು ಮೌಲ್ಯ ಪ್ರಸ್ತುತ ೩ ಲಕ್ಷ ಕೋಟಿ ರೂಪಾಯಿ ಆಗಿದೆ. ೨೦೩೦ರ ವೇಳೆಗೆ ಇದು ೯ ಲಕ್ಷ ಕೋಟಿ ರೂಪಾಯಿ ತಲುಪುವ ಗುರಿ ಹೊಂದಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೪ ಸೆಕೆಂಡ್ಸ್)**

ಇದೇ ೧೪ ರಿಂದ ೧೭ರವರೆಗೆ ಏರ್ಪಡಿಸಲಾಗಿರುವ ಭಾರತ ಟೆಕ್ಸ್ -೨೦೨೫ ಜಾಗತಿಕ ಸಮ್ಮೇಳನದಲ್ಲಿ ಕಚ್ಚಾ ವಸ್ತುಗಳು, ಬಿಡಿಭಾಗಗಳು ಸೇರಿದಂತೆ ಸಿದ್ಧಪಡಿಸಿದ ಉತ್ಪನ್ನಗಳವರೆಗಿನ

ಸಂಪೂರ್ಣ ಜವಳಿ ಮೌಲ್ಯ ಸರಪಳಿಯನ್ನು ಒಂದೇ ಸೂರಿನಡಿ ತರುವ ಉದ್ದೇಶ ಸಾಕಾರಗೊಂಡಿದೆ.

<><><><>

ನವದೆಹಲಿ ರೈಲು ನಿಲ್ದಾಣದಲ್ಲಿ ನೂಕುನುಗ್ಗಲು ಉಂಟಾದ ಪರಿಣಾಮ ನಿನ್ನೆ ಸಂಭವಿಸಿದ ಕಾಲ್ತುಳಿತದಲ್ಲಿ ಮೃತಪಟ್ಟವರ ಸಂಖ್ಯೆ ೧೮ಕ್ಕೆ ಏರಿಕೆಯಾಗಿದೆ. ಮೃತರಲ್ಲಿ ೧೧ ಮಹಿಳೆಯರು, ಐದು ಮಕ್ಕಳು ಸೇರಿದ್ದಾರೆ. ರೈಲು ನಿಲ್ದಾಣದ ೧೪ ಹಾಗೂ ೧೫ನೇ ಪ್ಲಾಟ್‌ಫಾರ್ಮ್‌ಗಳಲ್ಲಿ ನಿನ್ನೆ ರಾತ್ರಿ ೮ ಗಂಟೆಯ ಸುಮಾರಿಗೆ ತೀವ್ರ ಜನದಟ್ಟಣೆಯಿಂದ ಪರಿಸ್ಥಿತಿ ಅಸ್ತವ್ಯಸ್ತಗೊಂಡಿತು. ಘಟನೆ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ಅಶ್ವಿನಿ ವೈಷ್ಣವ್, ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸೆಕ್ಸೇನಾ ಸೇರಿದಂತೆ ಹಲವು ಗಣ್ಯರು ದುಃಖ ವ್ಯಕ್ತಪಡಿಸಿದ್ದು, ಕಾಲ್ತುಳಿತದಲ್ಲಿ ಮೃತರಾದವರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಹಾಗೆಯೇ ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ. ಕಾಲ್ತುಳಿತದ ಸಂತ್ರಸ್ತ ಕುಟುಂಬಗಳಿಗೆ ರೈಲ್ವೆ ಇಲಾಖೆ ಪರಿಹಾರ ಘೋಷಿಸಿದೆ. ಮೃತಪಟ್ಟವರ ಕುಟುಂಬದವರಿಗೆ ೧೦ ಲಕ್ಷ ರೂಪಾಯಿ ಹಾಗೂ ತೀವ್ರವಾಗಿ ಗಾಯಗೊಂಡವರಿಗೆ ಎರಡೂವರೆ ಲಕ್ಷ ರೂಪಾಯಿ, ಸಣ್ಣ ಪ್ರಮಾಣದಲ್ಲಿ ಗಾಯಗೊಂಡವರಿಗೆ ೧ ಲಕ್ಷ ರೂಪಾಯಿ ಪರಿಹಾರ ಘೋಷಿಸಲಾಗಿದೆ ಎಂದು ಉತ್ತರ ರೈಲ್ವೆ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಾಹಿತಿ ನೀಡಿದ್ದಾರೆ. ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್, ಬಿಹಾರ ಮೂಲದ ಮೃತರ ಕುಟುಂಬಗಳಿಗೆ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಘಟನೆ ಕುರಿತಂತೆ ತನಿಖೆ ನಡೆಸಲು ರೈಲ್ವೆ ಇಲಾಖೆ ಸಮಿತಿ ರಚಿಸಿದ್ದು, ವಾಣಿಜ್ಯ ಪ್ರಧಾನ ವ್ಯವಸ್ಥಾಪಕ ನರಸಿಂಗ್ ದೇವ್ ಮತ್ತು ಭದ್ರತಾ ಪ್ರಧಾನ ಆಯುಕ್ತ ಪಂಕಜ್ ಗಂಗ್ವಾರ್ ಈ ಸಮಿತಿಯ ಭಾಗವಾಗಿದ್ದಾರೆ. ಸಮಿತಿಯು ತನಿಖೆಯನ್ನು ಆರಂಭಿಸಿದ್ದು, ನವದೆಹಲಿಯ ರೈಲ್ವೆ ನಿಲ್ದಾಣದ ಎಲ್ಲಾ ಸಿಸಿಟಿವಿ ಕ್ಯಾಮೆರಾಗಳ ವಿಡಿಯೋ ದೃಶ್ಯಾವಳಿಗಳನ್ನು ಸಂಗ್ರಹಿಸುವ ಕಾರ್ಯದಲ್ಲಿ ನಿರತವಾಗಿದೆ.

<><><><>

ಪ್ರಯಾಗ್‌ರಾಜ್‌ನ ಮಹಾಕುಂಭದಲ್ಲಿ ಇಂದು "ಕುಂಭ್ ಕಿ ಆಸ್ಥ ಏವಂ ಜಲವಾಯು ಪರಿವರ್ತನ್" ಎಂಬ ಧ್ಯೇಯವಾಕ್ಯದಡಿ ಹವಾಮಾನ ಸಮ್ಮೇಳನ ನಡೆಯಿತು. ಉತ್ತರ ಪ್ರದೇಶದ ಮುಖ್ಯಮಂತ್ರಿ

ಯೋಗಿ ಆದಿತ್ಯನಾಥ್, ಸಮ್ಮೇಳನವನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಇಂದು ಅನೇಕ ಸಮಸ್ಯೆಗಳನ್ನು ಹವಾಮಾನ ಬದಲಾವಣೆಯಿಂದ ಗುರುತಿಸಬಹುದು. ನದಿಗಳು ಅಸಂಖ್ಯಾತ ಜೀವಗಳಿಗೆ ಆಶ್ರಯವಾಗಿದೆ. ನದಿಗಳು ಕಲುಷಿತವಾಗುವುದನ್ನು ಮತ್ತು ಒಣಗುವುದನ್ನು ತಡೆಯುವುದು ಜನರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು. ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡಲು ಮತ್ತು ಹಸಿರು ಶಕ್ತಿಯನ್ನು ಉತ್ತೇಜಿಸಲು ಕೇಂದ್ರ ಸರ್ಕಾರದ ಕ್ರಮಗಳ ಕುರಿತು ಇದೇ ವೇಳೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಪ್ರಸ್ತಾಪಿಸಿದರು.

<><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಓಮನ್‌ನ ಮಸ್ಕತ್‌ನಲ್ಲಿಂದು ನಡೆದ ೮ನೇ ಹಿಂದೂ ಮಹಾಸಾಗರ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಅವರು, ವಿಶ್ವದಲ್ಲಿ ಗಣನೀಯ ಬದಲಾವಣೆಗಳು ಸಂಭವಿಸುತ್ತಿರುವ ಸಮಯದಲ್ಲಿ ಈ ಸಮ್ಮೇಳನ ನಡೆಯುತ್ತಿದೆ. ಜಾಗತಿಕ ಕ್ರಮದಲ್ಲಿನ ಬದಲಾವಣೆಗಳನ್ನು ಹೊಸ ವಿಚಾರಗಳು ಮತ್ತು ಪರಿಕಲ್ಪನೆಗಳ ಮೂಲಕ ವ್ಯಕ್ತಪಡಿಸಬಹುದು ಎಂದು ಹೇಳಿದರು. ಚೀನಾ-ಪಾಕಿಸ್ತಾನ ಆರ್ಥಿಕ ಕಾರಿಡಾರ್ - ಸಿಪಿಇಸಿಯಂತಹ ಸಂಪರ್ಕ ಯೋಜನೆಗಳು ಪಾರದರ್ಶಕವಾಗಿರಬೇಕು ಎಂದು ಅವರು ಪ್ರತಿಪಾದಿಸಿದರು. ಭಾರತವು ವಿಯೆಟ್ನಾಂನಿಂದ ಹಿಡಿದು ಮಾರಿಷಸ್‌ವರೆಗಿನ ಇತರೆ ದೇಶಗಳ ನೌಕಾಪಡೆಗಳು, ಕರಾವಳಿ ಕಾವಲು ಪಡೆಗಳಿಗೆ ತರಬೇತಿ ನೀಡುತ್ತಿದೆ. ಜಾಗತಿಕ ದಕ್ಷಿಣದ ಮೇಲೆ ಭಾರತ ನಂಬಿಕೆ ಹೊಂದಿದೆ ಎಂದು ಸಚಿವ ಡಾ. ಎಸ್. ಜೈಶಂಕರ್ ಹೇಳಿದರು.

<><><>

ಭಾರತ ಮತ್ತು ಜಪಾನ್ ನಡುವಿನ ೬ನೇ ಆವೃತ್ತಿಯ ಜಂಟಿ ಮಿಲಿಟರಿ ಸಮರಾಭ್ಯಾಸವು ಇದೇ ೨೫ರಿಂದ ಮಾರ್ಚ್ ೯ರವರೆಗೆ ಜಪಾನ್‌ನ ಮೌಂಟ್ ಫ್ಯೂಜಿಯಲ್ಲಿ ನಡೆಯಲಿದೆ ಎಂದು ಭಾರತೀಯ ಸೇನೆ ತಿಳಿಸಿದೆ. ಈ ಸಮರಾಭ್ಯಾಸವು ವಿಶ್ವಸಂಸ್ಥೆಯ ಆದೇಶಾನುಸಾರ, ಯುದ್ಧ ಮತ್ತು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯನ್ನು ಕೈಗೊಳ್ಳುವಾಗ ಉಭಯ ದೇಶಗಳ ಪಡೆಗಳ ನಡುವೆ ಪರಸ್ಪರ ಕಾರ್ಯಸಾಧ್ಯತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ರಕ್ಷಣಾ ಸಚಿವಾಲಯ ಮಾಹಿತಿ ನೀಡಿದೆ.

<><><>

ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯು ಪಿಎಲ್ ೨೦೨೫ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಡೋದರದ ಕೋಟಂಬಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ಹಾಗೂ ಯುಪಿ ವಾರಿಯರ್ಸ್ ತಂಡಗಳು ಸೆಣಸಾಟ ನಡೆಸುತ್ತಿದ್ದು, ಪಂದ್ಯ ಪ್ರಗತಿಯಲ್ಲಿದೆ.

<><><><>

ಐಪಿಎಲ್ ಪಂದ್ಯಾವಳಿಗೆ ದಿನಾಂಕ ನಿಗದಿಯಾಗಿದ್ದು, ಮಾರ್ಚ್ ೨೨ ರಂದು ಕೊಲ್ಕೊತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ಕೆಕೆಆರ್ ಹಾಗೂ ಆರ್‌ಸಿಬಿ ತಂಡಗಳು ಮುಖಾಮುಖಿಯಾಗಲಿವೆ. ಒಟ್ಟು ೬೫ ದಿನಗಳು, ೧೩ ಸ್ಥಳಗಳಲ್ಲಿ ೭೪ ಐಪಿಎಲ್ ಪಂದ್ಯಗಳು ನಡೆಯಲಿವೆ ಎಂದು ಬಿಸಿಸಿಐ ತಿಳಿಸಿದೆ.

<><><><>

ಕೋಲ್ಕಾತ್ತಾದ ಯುವ ಭಾರತಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯದಲ್ಲಿ ಮೊಹಮದನ್ ಫುಟ್ಬಾಲ್ ಕ್ಲಬ್ ಹಾಗೂ ಈಸ್ಟ್ ಬೆಂಗಾಲ್ ಫುಟ್ಬಾಲ್ ಕ್ಲಬ್ ತಂಡಗಳು ಮುಖಾಮುಖಿಯಾಗಿದ್ದು,  ಪಂದ್ಯ ಪ್ರಗತಿಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>